ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	618
ಮಾನ್ಯ ಸದಸ್ಯರ ಹೆಸರು	ಶ್ರೀ ಗೋವಿಂದ ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	17.12.2021
ಉತ್ತರಿಸುವ ಸಚಿವರು	ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಲ್ಲಿ ಹಮ್ಮಿಕೊಂಡಿರುವ ಯೋಜನೆಗಳಾವುವು; (ವಿವರಗಳನ್ನು ಒದಗಿಸುವುದು)	ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಲ್ಲಿ ಈಕೆಳಕಂಡ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ. ಕ್ರ. ಸಂ – ಯೋಜನೆ 01 – ಸ್ವಯಂ ಉದ್ಯೋಗ ಸಾಲ ಯೋಜನೆ 02 – ಸಾಂಪ್ರದಾಯಕ ವೃತ್ತಿದಾರರ ಸಾಲ ಯೋಜನೆ 03 – ಗಂಗಾ ಕಲ್ಯಾಣ ನೀರಾವರಿ ಯೋಜನೆ 04 – ಅರಿವು-ಶೈಕ್ಷಣಿಕ ಯೋಜನೆ (ನವೀಕರಣ) 05 – ಉದ್ಯಮಶೀಲತಾ ತರಬೇತಿ/ವೃತ್ತಿ ತರಬೇತಿ.
ಆ)	ಪ್ರಸ್ತುತ ಇರುವ ಯೋಜನೆಗಳಲ್ಲಿ ಕಳೆದ ಮೂರು ವರ್ಷಗಳಿಂದ ಕೋಲಾರ ಜಿಲ್ಲೆಯಲ್ಲಿ ಎಷ್ಟು ಫಲಾನುಭವಿಗಳ ಇದರ ಪ್ರಯೋಜನವನ್ನು ಪಡೆದುಕೊಂಡಿರುತ್ತಾರೆ;	ಪ್ರಸ್ತುತ ಇರುವ ಯೋಜನೆಗಳಲ್ಲಿ ಕಳೆದ ಮೂರು ವರ್ಷಗಳಿಂದ ಕೋಲಾರ ಜಿಲ್ಲೆಯಲ್ಲಿ 1203 ಫಲಾನುಭವಿಗಳು ಪ್ರಯೋಜನವನ್ನು ಪಡೆದುಕೊಂಡಿದ್ದಾರೆ.
ಇ)	ಗಂಗಾ ಕಲ್ಯಾಣ ನೀರಾವರಿ ಯೋಜನೆಯಡಿಯಲ್ಲಿ ಎಷ್ಟು ಜನರು ಫಲಾನುಭವಿಗಳಿದ್ದಾರೆ ಹಾಗೂ ಬೋರ್ ವೆಲ್‌ಗಾಗಿ ಜಿಲ್ಲೆಯಲ್ಲಿ ಎಷ್ಟು ಬೇಡಿಕೆಗಳಿವೆ?	ಗಂಗಾ ಕಲ್ಯಾಣ ನೀರಾವರಿ ಯೋಜನೆಯಡಿ ಕಳೆದ ಮೂರು ವರ್ಷಗಳಲ್ಲಿ 148 ಫಲಾನುಭವಿಗಳು ಆಯ್ಕೆಯಾಗಿರುತ್ತಾರೆ ಹಾಗೂ ಬೋರ್‌ವೆಲ್‌ಗಾಗಿ ಜಿಲ್ಲೆಯಲ್ಲಿ 1018 ಆಸಕ್ತರು ಮನವಿ ಸಲ್ಲಿಸಿರುತ್ತಾರೆ.
ಈ)	ಬೇಡಿಕೆಗಳಿದ್ದರೆ ಯಾವಪ್ರಮಾಣದಲ್ಲಿ ಹಾಗೂ ಅದನ್ನು ಸರಿದೂಗಿಸಲು ಸರ್ಕಾರದಿಂದ ಯಾವ ಕ್ರಮವನ್ನು ಕೈಗೊಳ್ಳಲಾಗಿದೆ?	ಸರ್ಕಾರವು ಒದಗಿಸಿದ ಆಯವ್ಯಯಕ್ಕೆ ಅನುಗುಣವಾಗಿ ಎಲ್ಲಾ ವಿಧಾನ ಸಭಾ ಕ್ಷೇತ್ರಗಳಿಗೆ ಸಮಾನವಾಗಿ ಹಂಚಿಕೆ ಮಾಡಲಾಗುತ್ತದೆ.

ಸಂಖ್ಯೆ:ಹಿಂವಕ 745 ಬಿಎಂಎಸ್ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು